ನಿಮ್ಮಲ್ಲೊಬ್ಬನು ತನ್ನ ಮನೆಗೆ ಹಿಂದಿರುಗಿ ಬರುವಾಗ ಅಲ್ಲಿ ಮೂರು ದೊಡ್ಡ ಕೊಬ್ಬಿದ ಗರ್ಭಿಣಿ ಹೆಣ್ಣು ಒಂಟೆಗಳನ್ನು ಕಾಣಲು ಇಷ್ಟಪಡುತ್ತಾನೆಯೇ?

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಿಮ್ಮಲ್ಲೊಬ್ಬನು ತನ್ನ ಮನೆಗೆ ಹಿಂದಿರುಗಿ ಬರುವಾಗ ಅಲ್ಲಿ ಮೂರು ದೊಡ್ಡ ಕೊಬ್ಬಿದ ಗರ್ಭಿಣಿ ಹೆಣ್ಣು ಒಂಟೆಗಳನ್ನು ಕಾಣಲು ಇಷ್ಟಪಡುತ್ತಾನೆಯೇ?" ನಾವು ಹೇಳಿದೆವು: "ಹೌದು." ಅವರು
ಹೇಳಿದರು: "ನಿಮ್ಮಲ್ಲೊಬ್ಬನು ನಮಾಝ್ ಮಾಡುವಾಗ ಪಠಿಸುವ ಮೂರು ವಚನಗಳು ಮೂರು ದೊಡ್ಡ
ಕೊಬ್ಬಿದ ಗರ್ಭಿಣಿ ಹೆಣ್ಣು ಒಂಟೆಗಳಿಗಿಂತಲೂ ಉತ್ತಮವಾಗಿವೆ."
[صحيح] [رواه مسلم]

ಇಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿವರಿಸುವುದೇನೆಂದರೆ, ನಮಾಝಿನಲ್ಲಿ ಪಠಿಸುವ ಮೂರು ವಚನಗಳಿಗೆ ಸಿಗುವ ಪ್ರತಿಫಲವು ಒಬ್ಬ ವ್ಯಕ್ತಿ ತನ್ನ ಮನೆಯಲ್ಲಿ ಮೂರು ಕೊಬ್ಬಿದ ದೊಡ್ಡ ಗರ್ಭಿಣಿ ಹೆಣ್ಣು ಒಂಟೆಗಳನ್ನು ಹೊಂದಿರುವುದಕ್ಕಿಂತಲೂ ಉತ್ತಮವಾಗಿದೆ.

http://www.sunnah.global/hadeeth/kn/show/65053